## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 633 (810) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 26.12.2022 |
| ಉತ್ತರಿಸಬೇಕಾದ ಸಚಿವರು | : | ಪ್ರವಾಸೋದ್ಯಮ ಹಾಗೂ ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು. |

| ಕ್ರಮ ಸಂಖ್ಯೆ: | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕೇಂದ್ರ ಸರ್ಕಾರ ಹೊರತಂದಿರುವ plastic waste Management (Amendment) Rules-2022 ರ ವಿಶೇಷತೆಗಳು ಯಾವುವು (ಪೂರ್ಣ ವಿವರ ನೀಡುವುದು) | ಪರಿಸರ (ಸಂರಕ್ಷಣೆ) ಕಾಯಿದೆ, 1986 ರ ಅಡಿಯಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣಾ ನಿಯಮಗಳು, 2016 ರ 4 ನೇ ತಿದ್ದುಪಡಿಯಂತೆ 16.02.2022 ರಂದು ಪ್ಲಾಸ್ಟಿಕ್ ಪ್ಯಾಕೇಜಿಂಗ್‌ಗಾಗಿ ವಿಸ್ತೃತ ಉತ್ಪಾದಕರ ಜವಾಬ್ದಾರಿ (Extended Producer Responsibility - EPR) ಕುರಿತು ಕೇಂದ್ರ ಸರ್ಕಾರ, ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ (MoEF&CC)ವು ಅಧಿಸೂಚನೆಯನ್ನು ಹೊರಡಿಸಿದ್ದು, ಸದರಿ ಅಧಿಸೂಚನೆಯ ಮುಖ್ಯಾಂಶಗಳು ಈ ಕೆಳಕಂಡಂತಿವೆ:<br><br>• ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣಾ ನಿಯಮಗಳು, 2016, ಪ್ಲಾಸ್ಟಿಕ್ ತ್ಯಾಜ್ಯದ ಉತ್ಪಾದಕರಿಗೆ ಪ್ಲಾಸ್ಟಿಕ್ ತ್ಯಾಜ್ಯದ ಉತ್ಪಾದನೆಯನ್ನು ಕಡಿಮೆ ಮಾಡಲು ಕ್ರಮ ತೆಗೆದುಕೊಳ್ಳುವುದನ್ನು ಕಡ್ಡಾಯಗೊಳಿಸಿದೆ. ಪ್ಲಾಸ್ಟಿಕ್ ತ್ಯಾಜ್ಯವನ್ನು ಕಸದಲ್ಲಿ ಬೆರೆಸದಂತೆ, ಮೂಲದಲ್ಲಿಯೇ ತ್ಯಾಜ್ಯವನ್ನು ಬೇರ್ಪಡಿಸಿ ಶೇಖರಿಸಿಡುವುದನ್ನು ಖಾತ್ರಿಪಡಿಸಿ ಮತ್ತು ನಿಯಮಗಳಿಗೆ ಅನುಸಾರವಾಗಿ ಬೇರ್ಪಡಿಸಿದ ತ್ಯಾಜ್ಯವನ್ನು ಹಸ್ತಾಂತರಿಸಬೇಕು. ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆಗೆ ಸ್ಥಳೀಯ ಸಂಸ್ಥೆಗಳು, ಗ್ರಾಮ ಪಂಚಾಯಿತಿಗಳು, ತ್ಯಾಜ್ಯ ಉತ್ಪಾದಕರು, ಚಿಲ್ಲರೆ ವ್ಯಾಪಾರಿಗಳು ಮತ್ತು ಬೀದಿ ವ್ಯಾಪಾರಿಗಳ ಜವಾಬ್ದಾರಿಯನ್ನು ನಿಯಮಗಳು ಕಡ್ಡಾಯಗೊಳಿಸುತ್ತವೆ.<br>• ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣಾ ನಿಯಮಗಳು, 2016 ಉತ್ಪಾದಕರು, ಆಮದುದಾರ ಮತ್ತು ಬ್ರಾಂಡ್ ಮಾಲೀಕರ ಮೇಲೆ ವಿಸ್ತೃತ ಉತ್ಪಾದಕರ |

ಜವಾಬ್ದಾರಿಯನ್ನು ತಿಳಿಸಲಾಗಿದೆ. ವಿಸ್ತೃತ ಉತ್ಪಾದಕರ ಜವಾಬ್ದಾರಿಯು ಗ್ರಾಹಕ ಪೂರ್ವ ಮತ್ತು ನಂತರದ ಪ್ಲಾಸ್ಟಿಕ್ ಪ್ಯಾಕೇಜಿಂಗ್ ತ್ಯಾಜ್ಯ ಎರಡಕ್ಕೂ ಅನ್ವಯಿಸುತ್ತದೆ.

- ಈ ಮಾರ್ಗಸೂಚಿಗಳು ವಿಸ್ತೃತ ಉತ್ಪಾದಕರ ಜವಾಬ್ದಾರಿಯ ಅನುಷ್ಠಾನಕ್ಕೆ ಚೌಕಟ್ಟನ್ನು ಒದಗಿಸುತ್ತದೆ. ಉತ್ಪಾದಕರು, ಆಮದುದಾರರು, ಬ್ರ್ಯಾಂಡ್ ಮಾಲೀಕರು, ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಥವಾ ಮಾಲಿನ್ಯ ನಿಯಂತ್ರಣ ಸಮಿತಿಗಳು, ಮರುಬಳಕೆದಾರರು ಮತ್ತು ತ್ಯಾಜ್ಯ ಸಂಸ್ಕಾರಕಗಳ ವಿಸ್ತೃತ ಉತ್ಪಾದಕ ಜವಾಬ್ದಾರಿಯ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಮಾರ್ಗಸೂಚಿಗಳು ಪಾತ್ರಗಳು ಮತ್ತು ಜವಾಬ್ದಾರಿಗಳನ್ನು ಒದಗಿಸುತ್ತವೆ.
- ಈ ಕೆಳಗಿನ ಘಟಕಗಳನ್ನು ವಿಸ್ತೃತ ಉತ್ಪಾದಕರ ಹೊಣೆಗಾರಿಕೆಯ ಕಟ್ಟುಪಾಡುಗಳು ಮತ್ತು ಈ ಮಾರ್ಗಸೂಚಿಗಳ ನಿಬಂಧನೆಗಳ ಅಡಿಯಲ್ಲಿ ಒಳಗೊಳ್ಳುತ್ತದೆ:-

(i) ಪ್ಲಾಸ್ಟಿಕ್ ಪ್ಯಾಕೇಜಿಂಗ್‌ನ ಉತ್ಪಾದಕರು(P);
(ii) ಎಲ್ಲಾ ಆಮದು ಮಾಡಿದ ಪ್ಲಾಸ್ಟಿಕ್ ಪ್ಯಾಕೇಜಿಂಗ್ ಮತ್ತು/ಅಥವಾ ಆಮದು ಮಾಡಿದ ಉತ್ಪನ್ನಗಳ ಪ್ಲಾಸ್ಟಿಕ್ ಪ್ಯಾಕೇಜಿಂಗ್‌ನ ಆಮದುದಾರ(I)
(iii) ಭಾರತ ಸರ್ಕಾರದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಸಚಿವಾಲಯದ ಮಾನದಂಡಗಳ ಪ್ರಕಾರ ಸೂಕ್ಷ್ಮ ಮತ್ತು ಸಣ್ಣ ಉದ್ಯಮಗಳಾದ ಆನ್‌ಲೈನ್ ಪ್ಲಾಟ್‌ಫಾರ್ಮ್‌ಗಳು/ಮಾರುಕಟ್ಟೆ ಸ್ಥಳಗಳು ಮತ್ತು ಸೂಪರ್‌ಮಾರ್ಕೆಟ್‌ಗಳು/ಚಿಲ್ಲರೆ ಸರಪಳಿಗಳನ್ನು ಒಳಗೊಂಡಂತೆ ಬ್ರ್ಯಾಂಡ್ ಮಾಲೀಕರು(BO);
(iv) ಪ್ಲಾಸ್ಟಿಕ್ ತ್ಯಾಜ್ಯ ಸಂಸ್ಕರಣ ಘಟಕಗಳು(PWPs)

- ಕೆಳಗಿನ ಪ್ಲಾಸ್ಟಿಕ್ ಪ್ಯಾಕೇಜಿಂಗ್ ವಿಭಾಗಗಳು ವಿಸ್ತೃತ ಉತ್ಪಾದಕರ ಜವಾಬ್ದಾರಿಯ ವ್ಯಾಪ್ತಿಯ ಅಡಿಯಲ್ಲಿ ಬರುತ್ತವೆ:

(i) ವರ್ಗ I:-ಕಟ್ಟುನಿಟ್ಟಾದ ಪ್ಲಾಸ್ಟಿಕ್ ಪ್ಯಾಕೇಜಿಂಗ್;

**(ii)ವರ್ಗII:-**ಏಕ ಪದರ ಅಥವಾ ಬಹುಪದರದ ಹೊಂದಿಕೊಳ್ಳುವ ಪ್ಲಾಸ್ಟಿಕ್ ಪ್ಯಾಕೇಜಿಂಗ್ (ವಿವಿಧ ರೀತಿಯ ಪ್ಲಾಸ್ಟಿಕ್‌ನೊಂದಿಗೆ ಒಂದಕ್ಕಿಂತ ಹೆಚ್ಚು ಪದರಗಳು), ಪ್ಲಾಸ್ಟಿಕ್ ಶೀಟ್‌ಗಳು ಮತ್ತು ಪ್ಲಾಸ್ಟಿಕ್ ಶೀಟ್‌ನಿಂದ ಮಾಡಿದ ಕವರ್‌ಗಳು, ಕ್ಯಾರಿ ಬ್ಯಾಗ್‌ಗಳು, ಪ್ಲಾಸ್ಟಿಕ್ ಸ್ಯಾಚೆಟ್ ಅಥವಾ ಪೌಚ್‌ಗಳು;

**(iii)ವರ್ಗIII:-**ಮಲ್ಟಿಲೇಯರ್ಡ್ ಪ್ಲಾಸ್ಟಿಕ್ ಪ್ಯಾಕೇಜಿಂಗ್ (ಕನಿಷ್ಠ ಒಂದು ಪದರದ ಪ್ಲಾಸ್ಟಿಕ್ ಮತ್ತು ಕನಿಷ್ಠ ಒಂದು ಪದರದ ವಸ್ತುವು ಪ್ಲಾಸ್ಟಿಕ್ ಅನ್ನು ಹೊರತುಪಡಿಸಿ);

**(iv)ವರ್ಗIV:-**ಕಾಂಪೋಸ್ಟೇಬಲ್ ಪ್ಲಾಸ್ಟಿಕ್‌ಗಳಿಂದ ಮಾಡಿದ ಪ್ಲಾಸ್ಟಿಕ್ ಶೀಟ್ ಅಥವಾ ಪ್ಯಾಕೇಜಿಂಗ್‌ಗೆ ಬಳಸಲಾಗುವ ಉತ್ಪನ್ನಗಳು ಮತ್ತು ಕ್ಯಾರಿ ಬ್ಯಾಗ್‌ಗಳು.

**ನೋಂದಣಿ ಪ್ರಕ್ರಿಯೆಯ ವಿವರಗಳು;**

- ಈ ಕೆಳಗಿನ ಘಟಕಗಳು ಕೇಂದ್ರೀಯ ಮಾಲಿನ್ಯ ನಿಯಂತ್ರಣ ಮಂಡಳಿಯು ಅಭಿವೃದ್ಧಿಪಡಿಸಿದ ಕೇಂದ್ರೀಕೃತ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳಬೇಕು ಅವುಗಳೆಂದರೆ:-

(i)ಉತ್ಪಾದಕರು, (ಪಿ);

(ii)ಆಮದುದಾರ(i);

(iii)ಬ್ರಾಂಡ್ ಮಾಲೀಕರು(BO);

(iv)ಪ್ಲಾಸ್ಟಿಕ್ ತ್ಯಾಜ್ಯಸಂಸ್ಕರಣ ಘಟಕಗಳು:- ಮರುಬಳಕೆ, ತ್ಯಾಜ್ಯದಿಂದ ಶಕ್ತಿ, ತ್ಯಾಜ್ಯದಿಂದ ತೈಲ ಮತ್ತು ಕೈಗಾರಿಕಾ ಮಿಶ್ರಗೊಬ್ಬರ,

- ಉತ್ಪಾದಕರು, ಆಮದುದಾರರು ಮತ್ತು ಬ್ರಾಂಡ್-ಮಾಲೀಕರ ನೋಂದಣಿ (ಒಂದು ಅಥವಾ ಎರಡು ರಾಜ್ಯಗಳಲ್ಲಿ ಕಾರ್ಯನಿರ್ವಹಿಸುವ) ಮತ್ತು ಪ್ಲಾಸ್ಟಿಕ್ ತ್ಯಾಜ್ಯ ಸಂಸ್ಕರಣ ಘಟಕಗಳನ್ನು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಥವಾ ಮಾಲಿನ್ಯ ನಿಯಂತ್ರಣ ಸಮಿತಿಯು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯು ಅಭಿವೃದ್ಧಿಪಡಿಸಿದ ಕೇಂದ್ರೀಕೃತ ವಿಸ್ತೃತ ಉತ್ಪಾದಕ ಜವಾಬ್ದಾರಿ ಪೋರ್ಟಲ್ ಮೂಲಕ ನೋಂದಣಿ ಮಾಡಲಾಗುವುದು.

| | | |
|---|---|---|
| | | • ಎರಡಕ್ಕಿಂತ ಹೆಚ್ಚಿನ ರಾಜ್ಯಗಳಲ್ಲಿ ಕಾರ್ಯನಿರ್ವಹಿಸುವ ಘಟಕಗಳಿಗೆ ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯು ಕೇಂದ್ರೀಕೃತ ವಿಸ್ತೃತ ಉತ್ಪಾದಕ ಜವಾಬ್ದಾರಿ ಪೋರ್ಟಲ್ ಮೂಲಕ ನೋಂದಣಿ ಮಾಡಲಾಗುವುದು.<br><br>ಸದರಿ ಅಧಿಸೂಚನೆಯ ಮಾರ್ಗಸೂಚಿಯಲ್ಲಿ ಉತ್ಪಾದಕರು, ಆಮದುದಾರರು ಮತ್ತು ಬ್ರ್ಯಾಂಡ್-ಮಾಲೀಕರಿಗೆ ವಿಸ್ತೃತ ನಿರ್ಮಾಪಕ ಜವಾಬ್ದಾರಿ ಗುರಿಗಳನ್ನು ವರ್ಗವಾರು ನಿರ್ಧರಿಸಲಾಗುತ್ತದೆ. |
| ಆ) | ರಾಜ್ಯದಲ್ಲಿ ಕೇಂದ್ರ ಸರ್ಕಾರದ ನಿಯಮಗಳ ಅಡಿಯಲ್ಲಿ 1ನೇ ಜುಲೈ, 2022 ರಿಂದ ನಿಷೇಧಗೊಳಿಸಿರುವ ಪ್ಲಾಸ್ಟಿಕ್ ಬಳಕೆಯಿಂದ ಉಪಯೋಗಿಸುವ ವಸ್ತುಗಳು ಯಾವುವು: (ಪೂರ್ಣ ವಿವರ ನೀಡುವುದು) | ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ, (MoEF ಮತ್ತು CC) ನವದೆಹಲಿ, ಭಾರತ ಸರ್ಕಾರವು ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ ನಿಯಮಗಳು, 2016 ರ ನಿಯಮ 4(2) ರ ಪ್ರಕಾರ (ತಿದ್ದುಪಡಿ) ಅಧಿಸೂಚನೆ (G.S.R. No. 571 (E)) ಯನ್ನು ದಿನಾಂಕ:12ನೇ ಆಗಸ್ಟ್, 2021 ರಂದು "ಪಾಲಿಸ್ಟೈರೀನ್ ಮತ್ತು ವಿಸ್ತರಿತ ಪಾಲಿಸ್ಟೈರೀನ್" ಸೇರಿದಂತೆ ಈ ಕೆಳಕಂಡ ಏಕ ಬಳಕೆಯ ಪ್ಲಾಸ್ಟಿಕ್ (SUP) ತಯಾರಿಕೆ, ಆಮದು, ಸಂಗ್ರಹಣೆ, ವಿತರಣೆ, ಮಾರಾಟ ಮತ್ತು ಬಳಕೆಯನ್ನು ಜುಲೈ 1, 2022 ರಿಂದ ಜಾರಿಗೆ ಬರುವಂತೆ ನಿಷೇಧಿಸಲ್ಪಟ್ಟಿರುತ್ತವೆ.<br><br>*(ಎ) ಪ್ಲಾಸ್ಟಿಕ್ ಸ್ಟಿಕ್‌ಗಳೊಂದಿಗೆ ಇಯರ್ ಬಡ್‌ಗಳು, ಬಲೂನ್‌ಗಳಿಗೆ ಬಳಸುವ ಪ್ಲಾಸ್ಟಿಕ್ ಸ್ಟಿಕ್‌ಗಳು, ಪ್ಲಾಸ್ಟಿಕ್ ಧ್ವಜಗಳು, ಪ್ಲಾಸ್ಟಿಕ್ ಕ್ಯಾಂಡಿ ಸ್ಟಿಕ್‌ಗಳು, ಪ್ಲಾಸ್ಟಿಕ್ ಐಸ್‌ಕ್ರೀಮ್ ಸ್ಟಿಕ್‌ಗಳು, ಅಲಂಕಾರಕ್ಕಾಗಿ ಬಳಸುವ ಪಾಲಿಸ್ಟೈರೀನ್ [ಥರ್ಮಾಕೋಲ್].*<br><br>*(ಬಿ) ಪ್ಲಾಸ್ಟಿಕ್ ಪ್ಲೇಟ್‌ಗಳು, ಪ್ಲಾಸ್ಟಿಕ್ ಕಪ್‌ಗಳು ಮತ್ತು ಲೋಟಗಳು, ಫೋರ್ಕ್‌ಗಳು, ಪ್ಲಾಸ್ಟಿಕ್ ಚಮಚಗಳು, ಪ್ಲಾಸ್ಟಿಕ್ ಚಾಕುಗಳು, ಪ್ಲಾಸ್ಟಿಕ್ ಟ್ರೇಗಳಂತಹ ಕಟ್ಲರಿಗಳು, ಸ್ವೀಟ್ ಬಾಕ್ಸ್‌ಗಳ ಸುತ್ತ ಸುತ್ತುವ ಅಥವಾ ಪ್ಯಾಕಿಂಗ್ ಫಿಲ್ಮ್‌ಗಳು, ಆಮಂತ್ರಣ ಪತ್ರಗಳು ಮತ್ತು ಸಿಗರೇಟ್ ಪ್ಯಾಕೆಟ್‌ಗಳು, 100 ಮೈಕ್ರಾನ್‌ಗಿಂತ ಕಡಿಮೆ ದಪ್ಪದ ಪ್ಲಾಸ್ಟಿಕ್ ಅಥವಾ **PVC** ಬ್ಯಾನರ್‌ಗಳು, ಪ್ಲಾಸ್ಟಿಕ್ ಸ್ಟಿರರ್‌ಗಳು.* |

(೨೮)

| | | |
|---|---|---|
| ಇ) | ರಾಜ್ಯದಲ್ಲಿ ಸರ್ಕಾರ ಹಾಲು, ಬ್ರೆಡ್, ಚಿಪ್ಸ್ ಮುಂತಾದ ಪದಾರ್ಥಗಳನ್ನು ತುಂಬಲು ಉಪಯೋಗಿಸುವ ಪ್ಲಾಸ್ಟಿಕ್ ಕವರುಗಳ ಬಳಕೆಯನ್ನು ಸಹ ನಿಷೇಧಿಸಲು ಸರ್ಕಾರ ಉದ್ದೇಶಿಸಿದೆಯೇ: (ಹಾಗಿದ್ದಲ್ಲಿ, ಪೂರ್ಣ ವಿವರ ನೀಡುವುದು) | ರಾಜ್ಯ ಸರ್ಕಾರವು ಅಧಿಸೂಚನೆ ಸಂಖ್ಯೆ:ಅಪಜೀ 17 ಇಪಿಸಿ 2012, ದಿನಾಂಕ:11.03.2016ರಲ್ಲಿ ಹಾಗೂ ಕೇಂದ್ರ ಸರ್ಕಾರವು ಅಧಿಸೂಚನೆ ಸಂಖ್ಯೆ:GSR 571 (E), ದಿನಾಂಕ:12.08.2021ರಲ್ಲಿ ನಿಷೇಧಿಸಲಾಗಿರುವ ಪ್ಲಾಸ್ಟಿಕ್ ವಸ್ತುಗಳನ್ನು ಹೊರತುಪಡಿಸಿ ಯಾವುದೇ ಪ್ಲಾಸ್ಟಿಕ್ ವಸ್ತುಗಳನ್ನು ನಿಷೇಧಿಸುವ ಪ್ರಸ್ತಾವನೆ ರಾಜ್ಯ ಸರ್ಕಾರದ ಮುಂದಿರುವುದಿಲ್ಲ. |
| ಈ) | ರಾಜ್ಯದಲ್ಲಿ ಒಂದೇ ಬಾರಿ ಉಪಯೋಗಿಸುವ ಪ್ಲಾಸ್ಟಿಕ್ ಬಗ್ಗೆ ಅರಿವು ಮೂಡಲು ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳು ಯಾವುವು: ಮತ್ತು ಯಾವ ಸಂಸ್ಥೆಗಳಿಂದ ಈ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ? (ಪೂರ್ಣ ವಿವರ ನೀಡುವುದು) | ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ, (MoEF ಮತ್ತುCC) ನವದೆಹಲಿ, ಭಾರತ ಸರ್ಕಾರವು ಏಕ ಬಳಕೆಯ ಪ್ಲಾಸ್ಟಿಕ್ ಉತ್ಪನ್ನಗಳ ಅಧಿಸೂಚನೆಯ ನಿಷೇಧದ ಬಗ್ಗೆ ಮಂಡಳಿಯಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಸ್ಥಳೀಯ ಸಂಸ್ಥೆಗಳಿಗೆ ಏಕ ಬಳಕೆ ಪ್ಲಾಸ್ಟಿಕ್ ನಿಷೇಧದ ಅಧಿಸೂಚನೆಯನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವ ಸಂಬಂಧ ಈಗಾಗಲೇ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ.<br><br>ಸದರಿ ನಿಷೇಧದ ಬಗ್ಗೆ ಮಂಡಳಿಯು ಸರ್ಕಾರೇತರ ಸಂಸ್ಥೆಗಳ ಜೊತೆಗೂಡಿ ಶಾಲಾ-ಕಾಲೇಜು, ವಿದ್ಯಾ ಸಂಸ್ಥೆಗಳಲ್ಲಿ, ಮೆಟ್ರೋ ನಿಲ್ದಾಣ ಹಾಗೂ ಬಸ್ ನಿಲ್ದಾಣಗಳಲ್ಲಿ ಸಹ ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಂಡಿರುತ್ತದೆ.<br><br>ಏಕ ಬಳಕೆ ಪ್ಲಾಸ್ಟಿಕ್ ನಿಷೇಧದ ಕುರಿತು ಮಂಡಳಿಯು ಮೆಟ್ರೋ, ದೂರದರ್ಶನ, ರೇಡಿಯೋ ಮುಂತಾದವುಗಳಲ್ಲಿ ಜಾಹಿರಾತುಗಳನ್ನು ನೀಡಲಾಗಿರುತ್ತದೆ.<br><br>ಮಂಡಳಿಯು ಪೌರಾಡಳಿತ ನಿರ್ದೇಶನಾಲಯ, ನಗರಾಭಿವೃದ್ಧಿ ಇಲಾಖೆ, ಎಲ್ಲಾ ಜಿಲ್ಲಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಸ್ಥಳೀಯ ಸಂಸ್ಥೆಗಳಿಗೆ ಸದರಿ ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ವಸ್ತುಗಳ ಕುರಿತು ತರಬೇತಿಯನ್ನು ನೀಡಲಾಗಿದೆ ಮತ್ತು ಅವರಿಗೆ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವಂತೆ ಸೂಚಿಸಲಾಗಿರುತ್ತದೆ.<br><br>ಮುಂದುವರೆದಂತೆ, ಮಂಡಳಿಯ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಜೊತೆಗೂಡಿ ಮಾಲ್‌ಗಳು, ಬೀದಿ ಬದಿ |

| | | |
|---|---|---|
| | | ವ್ಯಾಪಾರಿಗಳು, ಅಂಗಡಿ–ಮುಂಗಟ್ಟುಗಳು, ಪ್ಲಾಸ್ಟಿಕ್ ಉತ್ಪಾದಕರು, ಬಳಕೆದಾರರ ಘಟಕಗಳನ್ನು ಪರಿವೀಕ್ಷಣೆ ನಡೆಸಿ ನಿಷೇಧಿತ ಏಕ ಬಳಕೆಯ ವಸ್ತುಗಳು ಕಂಡುಬಂದಲ್ಲಿ ಅಂತಹ ವಸ್ತುಗಳನ್ನು ಮುಟ್ಟುಗೋಲು ಹಾಕಿ, ತಪ್ಪಿತಸ್ಥರ ವಿರುದ್ಧ ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಸೂಚನೆಯನ್ವಯ ದಂಡವನ್ನು ವಿಧಿಸಲಾಗುತ್ತಿರುತ್ತದೆ. |

ಸಂಖ್ಯೆ: ಅಪಜೀ 268 ಇಎನ್‌ಜಿ 2022

(ಆನಂದ್ ಸಿಂಗ್)
ಪ್ರವಾಸೋದ್ಯಮ ಹಾಗೂ ಜೀವಿಪರಿಸ್ಥಿತಿ
ಮತ್ತು ಪರಿಸರ ಸಚಿವರು.